# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** "ಅರಿವು" (ವಿದ್ಯಾಭ್ಯಾಸ ಸಾಲ) ಯೋಜನೆಯಡಿಯಲ್ಲಿ ಮತೀಯ ಅಲ್ಪಸಂಖ್ಯಾತರ ಕೌಟುಂಬಿಕ ವಾರ್ಷಿಕ ಆದಾಯ ಮಿತಿಯನ್ನು ರೂ. 4.50 ಲಕ್ಷದಿಂದ ರೂ. 6.00 ಲಕ್ಷಕ್ಕೆ ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 65 ಎಂಡಿಸಿ 2014, ದಿನಾಂಕ: 17.01.2014 ಮತ್ತು ದಿನಾಂಕ: 27.08.2014

2) ಸರ್ಕಾರದ ಆದೇಶ ಸಂಖ್ಯೆ: ಹಿಂವಕ 148 ಬಿಸಿಎ 2015, ದಿನಾಂಕ: 04.06.2015

3) ವ್ಯವಸ್ಥಾಪಕ ನಿರ್ದೇಶಕರು, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ: ಕಅಅನಿ/ಅರಿವು/15-16/1331, ದಿನಾಂಕ: 12.06.2015.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರಿ ಆದೇಶಗಳಲ್ಲಿ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರುವ ವಿದ್ಯಾರ್ಥಿಗಳಿಗೆ ಸಿ.ಇ.ಟಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿ ಶಿಕ್ಷಣಕ್ಕೆ ಸಂಬಂಧಪಟ್ಟ ಕೋರ್ಸ್‌ಗಳು ಹಾಗೂ ಸ್ನಾತಕೋತ್ತರ ಪಧವಿಗಳಲ್ಲಿ ವಿದ್ಯಾಭ್ಯಾಸ ಮುಂದುವರೆಸಲು ಬಯಸುವ ವಿದ್ಯಾರ್ಥಿಗಳಿಗೆ ಬಡ್ಡಿರಹಿತ ವಿದ್ಯಾಭ್ಯಾಸ ಸಾಲವನ್ನು "ಅರಿವು" (ವಿದ್ಯಾಭ್ಯಾಸ ಸಾಲ) ಯೋಜನೆಯಡಿಯಲ್ಲಿ ಮಂಜೂರು ಮಾಡಲು ಆದೇಶಿಸಲಾಗಿದೆ.

ಈ ಯೋಜನೆಯಡಿಯಲ್ಲಿ ವಿದ್ಯಾಭ್ಯಾಸ ಸಾಲವನ್ನು ಪಡೆಯಲು ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿಯನ್ನು ರೂ. 4.50 ಲಕ್ಷಗಳಿಗೆ ನಿಗಧಿಪಡಿಸಲಾಗಿದೆ. ಮೇಲೆ ಓದಲಾದ (2) ರ ಸರ್ಕಾರಿ ಆದೇಶದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯಿಂದ ನೀಡಲಾಗುತ್ತಿರುವ ಯೋಜನೆಗಳಿಗೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗಧಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ-ತಾಯಿ/ಪೋಷಕರ, ವಾರ್ಷಿಕ ಒಟ್ಟು ಆದಾಯ ಮಿತಿಯನ್ನು ರೂ. 4.50 ಲಕ್ಷಗಳಿಂದ ರೂ. 6.00 ಲಕ್ಷಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಅದರಂತೆ, ಮೇಲೆ ಓದಲಾದ (3) ರ ಪತ್ರದಲ್ಲಿ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ "ಅರಿವು" (ವಿದ್ಯಾಭ್ಯಾಸ ಸಾಲ) ಯೋಜನೆಯಡಿ ನಿಗಧಿಪಡಿಸಿರುವ, ವಿದ್ಯಾರ್ಥಿಗಳ ಪೋಷಕರ ಆದಾಯ ಮಿತಿಯನ್ನು ರೂ. 4.50 ಲಕ್ಷಗಳಿಂದ ರೂ. 6.00 ಲಕ್ಷಗಳಿಗೆ ಹೆಚ್ಚಿಸಿ ಪರಿಷ್ಕೃತ ಆದೇಶ ಹೊರಡಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 57 MDC 2015, ಬೆಂಗಳೂರು, ದಿನಾಂಕ: 16.10.2015**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ "ಅರಿವು" (ವಿದ್ಯಾಭ್ಯಾಸ ಸಾಲ) ಯೋಜನೆಯಡಿ, ವಿದ್ಯಾರ್ಥಿಗಳಿಗೆ ವೃತ್ತಿಪರ ಶಿಕ್ಷಣ ಹಾಗೂ ಸ್ನಾತಕೋತ್ತರ ಪಧವಿಗಳಿಗೆ ಬಡ್ಡಿರಹಿತ

ಸಾಲವನ್ನು ನೀಡಲು ನಿಗಧಿಪಡಿಸಿರುವ, ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿಯನ್ನು ರೂ. 4.50 ಲಕ್ಷಗಳಿಂದ ರೂ. 6.00 ಲಕ್ಷಗಳಿಗೆ (ರೂ. ಆರು ಲಕ್ಷಗಳು ಮಾತ್ರ) ಹೆಚ್ಚಿಸಿ ಆದೇಶಿಸಲಾಗಿದೆ. ಮತ್ತು ಈ ಆದಾಯದ ಮಿತಿಯು ರೂ. 6.00 ಲಕ್ಷಗಳಿಗಿಂತ ಮೀರಿರಬಾರದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ/800/ವೆಚ್ಚ-3/2015, ದಿನಾಂಕ:08.10.2015 ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎಂ. ನಾಗರತ್ನ 16/10/15
(ಎಂ. ನಾಗರತ್ನ)
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.
16/10/15

ಗೆ:

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
4. ಕಾರ್ಯದರ್ಶಿ, ಕರ್ನಾಟಕ ಅಲ್ಪಸಂಖ್ಯಾತರ ಆಯೋಗ, ಬೆಂಗಳೂರು.
5. ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ಹಜ್ ಸಮಿತಿ, ಬೆಂಗಳೂರು.
6. ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ಹಜ್ ಸಮಿತಿ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಉರ್ದು ಅಕಾಡೆಮಿ, ಬೆಂಗಳೂರು.
8. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
9. ಎಲ್ಲಾ ಜಿಲ್ಲಾಧಿಕಾರಿಗಳು (ವ್ಯಸ್ಥಾಪಕ ನಿರ್ದೇಶಕರು, ಕೆ.ಎಂ.ಡಿ.ಸಿ. ಇವರ ಕಛೇರಿಯಿಂದ)
10. ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್, (ವ್ಯವಸ್ಥಾಪಕ ನಿರ್ದೇಶಕರು, ಕೆ.ಎಂ.ಡಿ.ಸಿ. ಇವರ ಕಛೇರಿಯಿಂದ)
11. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
12. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು, (ವ್ಯವಸ್ಥಾಪಕ ನಿರ್ದೇಶಕರು, ಕೆ.ಎಂ.ಡಿ.ಸಿ. ಇವರ ಕಛೇರಿಯಿಂದ)
13. ಆಂತರಿಕ ಆರ್ಥಿಕ ಸಲಹೆಗಾರರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
14. ಜಂಟಿ ನಿರ್ದೇಶಕರು, ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 & 9) 2ನೇ ಮಹಡಿ, ಬೆಂಗಳೂರು.
16. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವರ ಆಪ್ತ ಕಾರ್ಯದರ್ಶಿ,
17. ಸರ್ಕಾರದ ಅಧೀನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು
18. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.